ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 1/2/2020

# ಗಾಂಧಿ ಕನಸಿನ ಪೌರಶಾಸನ ನನಸು

ನವದೆಹಲಿ: ಸಂಸತ್ತಿನ ಉಭಯ ಸದನಗಳ ಜಂಟಿ ಅಧಿವೇಶನ ಉದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಪೌರತ್ವ ಕಾಯ್ದೆಗೆ ಸೂಕ್ತ ತಿದ್ದುಪಡಿ ತರುವ ಮೂಲಕ ನರೇಂದ್ರ ಮೋದಿ ಸರ್ಕಾರ ಮಹಾತ್ಮ ಗಾಂಧೀಜಿಯ ಕನಸು ನನಸಾಗಿಸಿದೆ ಎಂದು ಕೊಂಡಾಡಿದರು. ಈ ಸಂದರ್ಭದಲ್ಲಿ ಕಪ್ಪುಪಟ್ಟಿ ಧರಿಸಿದ್ದ 14 ವಿರೋಧ ಪಕ್ಷಗಳ ಸದಸ್ಯರು 'ಶೇಮ್ ಶೇಮ್' ಘೋಷಣೆ ಕೂಗಿ ಪ್ರತಿಭಟನಾ ಫಲಕಗಳನ್ನು ಪ್ರದರ್ಶಿಸಿದರು.

ಪೌರ ಶಾಸನ ತಿದ್ದುಪಡಿಯ ಬಗ್ಗೆ ಪ್ರಶಂಸಿಸಿದಾಗ ಪ್ರತಿಪಕ್ಷಗಳ ಸದಸ್ಯರಿಂದ ತೀವ್ರ ಪ್ರತಿಭಟನೆ ವ್ಯಕ್ತವಾಯಿತು. ಬಜೆಟ್ ಅಧಿವೇಶನದ ಆರಂಭದ ದಿನವಂದು ಸರ್ಕಾರದ ಸಾಧನೆಗಳನ್ನು ಪಟ್ಟಿಮಾಡಿದ ಕೋವಿಂದ್ ಸುಮಾರು 70 ನಿಮಿಷಗಳ ಸುದೀರ್ಘ ಭಾಷಣದಲ್ಲಿ ರಾಷ್ಟ್ರಪತಿಯವರು ಇದೊಂದು ಚಾರಿತ್ರಿಕ ಹೆಜ್ಜೆಯಾಗಿದ್ದು ನೆರೆಯ ಮೂರು ದೇಶಗಳಲ್ಲಿ ಕಿರುಕುಳ ತಾಳಲಾರದೆ ಭಾರತಕ್ಕೆ ವಲಸೆ ಬಂದ



- ಸಂಸತ್ ಜಂಟಿ ಸದನ ಉದ್ದೇಶಿಸಿ ರಾಷ್ಟ್ರಪತಿ ಭಾಷಣ
- ಜಮ್ಮು-ಕಾಶ್ಮೀರ ವಿಶೇಷ ಸ್ಥಾನಮಾನ ರದ್ದು ಸಮರ್ಥನೆ
- ಕಪ್ಪುಪಟ್ಟಿ ಧರಿಸಿದ್ದ ಪ್ರತಿಪಕ್ಷಗಳ ಸದಸ್ಯರ ಪ್ರತಿಭಟನೆ

ಧಾರ್ಮಿಕ ಅಲ್ಪಸಂಖ್ಯಾತರಿಗೆ ಸಾಮಾಜಿಕ ನ್ಯಾಯ ಒದಗಿಸಿದಂತಾಗಿದೆ ಎಂದು ಸಮರ್ಥಿಸಿಕೊಂಡರು.

ಅಯೋಧ್ಯೆ ವಿವಾದ ಪ್ರಕರಣದಲ್ಲಿ ದೇಶದ ಜನತೆ ಸುಪ್ರೀಂ ಕೋರ್ಟ್ ತೀರ್ಪಿನ ಬಗ್ಗೆ ತೋರಿದ ಸಂಯಮದ ವರ್ತನೆ ಪ್ರಶಂಸಾರ್ಹವೆಂದು ಬಣ್ಣಿಸಿದರು. ಸಂವಿಧಾನದ 370ನೇ ವಿಧಿ ರದ್ದುಪಡಿಸಿ ಜಮ್ಮು-ಕಾಶ್ಮೀರದ ಜನರಿಗೆ ಸಮಾನ ಸ್ಥಾನ ಕಲ್ಪಿಸಿದ ಸರ್ಕಾರದ ಕ್ರಮವೂ ಸ್ವಾಗತಾರ್ಹವೆಂದು ಅವರು ನುಡಿದರು. ಪ್ರತಿಭಟನೆಗಳ ಸಂದರ್ಭದಲ್ಲಿ ಹಿಂಸಾಚಾರದ ಕೃತ್ಯಗಳು ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತವೆ ಎಂದು ಅವರು ಇದೇ ವೇಳೆ ಎಚ್ಚರಿಸಿದರು. ದೇಶದ ಆರ್ಥಿಕತೆ ಬುನಾದಿ ಸದೃಢವಾಗಿದ್ದು ಸ್ಥಳೀಯ ಸರಕುಗಳನ್ನೇ ಖರೀದಿಸಿ ಪುನಶ್ಚೇತನದ ಪ್ರಯತ್ನಗಳಿಗೆ ಉತ್ತೇಜನ ನೀಡುವಂತೆ ಅವರು ಸಲಹೆ ಮಾಡಿದರು.

ಕಾಂಗ್ರೆಸ್ ಸಂಸದರು ಪಕ್ಷದ ಅಧ್ಯಕ್ಷೆ ಸೋನಿಯಾ ಗಾಂಧಿಯವರ ನೇತೃತ್ವದಲ್ಲಿ ಸಂಸತ್ ಭವನದ ಆವರಣದಲ್ಲಿರುವ ಗಾಂಧಿ ಪ್ರತಿಮೆಯ ಬಳಿ ಸಂವಿಧಾನ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗೆ ಒತ್ತಾಯಿಸಿ ಮತಪ್ರದರ್ಶನ ನಡೆಸಿದರು.